# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 224 (277)
ಸದಸ್ಯರ ಹೆಸರು : ಶ್ರೀ. ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 12.07.2018
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ, ಪ್ರೌಢಶಾಲೆಯಿಂದ ಪದವಿ ಪೂರ್ವ ಕಾಲೇಜಿಗೆ ಬಡ್ತಿ ಪಡೆದ ಶಿಕ್ಷಕರು / ಉಪನ್ಯಾಸಕರಿಗೆ 15, 20 ಮತ್ತು 25 ವರ್ಷಗಳ ಕಾಲಮಿತಿ ಬಡ್ತಿ ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ. | ಹಾಗಿದ್ದಲ್ಲಿ, ಇದನ್ನು ಸರಿಪಡಿಸಲು ಇದುವರೆವಿಗೂ ಸರ್ಕಾರ ತೆಗೆದುಕೊಂಡ ಕ್ರಮಗಳೇನು: (ಪೂರ್ಣ ವಿವರ ನೀಡುವುದು) | ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಶಿಕ್ಷಕರ ಹುದ್ದೆಗೆ ಬಡ್ತಿ ಹೊಂದಿದ ಸಂದರ್ಭದಲ್ಲಿ ಪ್ರಾಥಮಿಕ ಶಾಲಾ ಹುದ್ದೆಯಲ್ಲಿ 10, 15 ವರ್ಷದ ಬಡ್ತಿಯನ್ನು ಸೇವಾ ಅವಧಿಯಲ್ಲಿ ಪಡೆಯದೆ ಇದ್ದಲ್ಲಿ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಯಲ್ಲಿ 10, 15 ವರ್ಷ ಪೂರ್ಣಗೊಳಿಸಿದ ನಂತರ ಈ ಸೌಲಭ್ಯವನ್ನು ನೀಡಲಾಗುತ್ತಿದೆ.<br><br>ಸರ್ಕಾರದ ಆದೇಶ ಸಂಖ್ಯೆ : ಎಫ್‌ಡಿ 12 ಎಸ್‌ಆರ್‌ಪಿ 2012 (8), ದಿನಾಂಕ : 14/06/2012ರಲ್ಲಿ ತಿಳಿಸಿರುವಂತೆ ಸೇವಾವಧಿಯಲ್ಲಿ ಒಂದೂ ಪದೋನ್ನತಿ ಪಡೆಯದೇ ಇರುವ ಶಿಕ್ಷಕರಿಗೆ 20, 25, 30 ವರ್ಷಗಳ ವಿಶೇಷ ಹೆಚ್ಚುವರಿ ವೇತನ ಭತ್ಯೆಯನ್ನು ಮಂಜೂರಾತಿ ಮಾಡಲು ಅವಕಾಶವಿರುತ್ತದೆ. ಆದರೆ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಗೆ ಬಡ್ತಿ ಹೊಂದಿರುವುದರಿಂದ, ಅಂದರೆ ಸದರಿ ಶಿಕ್ಷಕರುಗಳು ತಮ್ಮ ಸೇವಾವಧಿಯಲ್ಲಿ ಪದೋನ್ನತಿ ಪಡೆದಿರುವುದರಿಂದ 20, 25, 30 ವರ್ಷಗಳ ಹೆಚ್ಚುವರಿ ವಿಶೇಷ ವೇತನ ಬಡ್ತಿ ಮಂಜೂರಾತಿಗೆ ಅವಕಾಶವಿರುವುದಿಲ್ಲ. |
| ಇ | ಯಾವ ಕಾಲಮಿತಿಯಲ್ಲಿ ಸದರಿ ಬಡ್ತಿ ಶಿಕ್ಷಕರಿಗೆ 15, 20 ಮತ್ತು 25 ವರ್ಷಗಳ ಕಾಲಮಿತಿ ಬಡ್ತಿಯನ್ನು ನೀಡಲಾಗುವುದು? | |

ಸಂಖ್ಯೆ: ಇಡಿ 151 ಎಸ್‌ಎಲ್‌ಬಿ 2018

(ಎನ್ ಮಹೇಶ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು